# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 892(879) |
| ಸದಸ್ಯರ ಹೆಸರು | : ಶ್ರೀ ಕೆ.ವಿವೇಕಾನಂದ(ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 15-12-2025 |
| ಉತ್ತರಿಸುವವರು | : ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳೂ ಎಷ್ಟು; ಈ ಎಲ್ಲಾ ಕಾಲೇಜುಗಳಲ್ಲಿ ಶೌಚಾಲಯ ಕೊಠಡಿಗಳು ಇದೆಯೇ; ಶೌಚಾಲಯಗಳ ಅವಶ್ಯಕತೆ ಇರುವ ಕಾಲೇಜುಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ 440. ಪ್ರಸ್ತುತ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶೌಚಾಲಯ ಕೊಠಡಿಗಳ ವ್ಯವಸ್ಥೆ ಇರುತ್ತದೆ.<br>ಈಗಾಗಲೇ ಸ್ವಂತ ಕಟ್ಟಡ ಹೊಂದಿರುವ ಕಾಲೇಜುಗಳ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಶೌಚಾಲಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಆದಾಗ್ಯೂ 259 ಕಾಲೇಜುಗಳಿಗೆ ಹೆಚ್ಚುವರಿಯಾಗಿ ಶೌಚಾಲಯಗಳ ಅವಶ್ಯವಿರುತ್ತದೆ. |
| ಆ) | ಪದವಿ ಕಾಲೇಜುಗಳಲ್ಲಿ ಇನ್ನೂ ಅವಶ್ಯಕತೆ ಇರುವ ಶೌಚಾಲಯ ಕೊಠಡಿಗಳನ್ನು ಸರ್ಕಾರ ಯಾವ ಕಾಲ ಮಿತಿಯೊಳಗೆ ಪೂರ್ಣ ಪ್ರಮಾಣದಲ್ಲಿ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದು; | ಈಗಾಗಲೇ ಸ್ವಂತ ಕಟ್ಟಡ ಹೊಂದಿರುವ ಹಾಗೂ ಇತ್ತೀಚೆಗೆ ನಿವೇಶನ ಮಂಜೂರಾದ ಕಾಲೇಜುಗಳ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ, ಕಾಲೇಜಿನ ಅಗತ್ಯತೆಯನುಸಾರ ಹಾಗೂ ಸರ್ಕಾರದಿಂದ ಒದಗಿಸಲಾಗುವ ಅನುದಾನದ ಲಭ್ಯತೆ ಅನುಸಾರ ಪರಿಶೀಲಿಸಿ ಶೌಚಾಲಯಗಳನ್ನು ಒಳಗೊಂಡಂತೆ ವಿವಿಧ ಕಟ್ಟಡ ಮೂಲಭೂತ ಸೌಕರ್ಯಗಳನ್ನು ಒದಗಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |
| ಇ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; ಈ ಉಪನ್ಯಾಸಕರಿಗೆ ಇಲಾಖೆ ಹಂಚಿಕೆ ಮಾಡಿರುವ ಕಾರ್ಯಭಾರ ಎಷ್ಟು; ಹಾಗೂ ಇವರಿಗೆ ನೀಡುತ್ತಿರುವ ವೇತನ ಎಷ್ಟು; | ಈ ಹಿಂದಿನ 2024-25ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನೇ ಪ್ರಸ್ತುತ 2025-26ನೇ ಸಾಲಿಗೆ ತಾತ್ಕಾಲಿಕವಾಗಿ ಮುಂದುವರೆಸಿದ್ದು, ಅದರಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ: 8467.<br>ಅತಿಥಿ ಉಪನ್ಯಾಸಕರಿಗೆ ಕನಿಷ್ಠ 4/5 ಗಂಟೆ ಹಾಗೂ ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ಹಂಚಿಕೆ ಮಾಡಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರನ್ವಯ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನಿಗದಿಪಡಿಸಿರುವ ಗೌರವಧನದ ವಿವರ ಕೆಳಗಿನಂತಿದೆ; |

| ಕ್ರ. ಸಂ. | ಸೇವಾವಧಿ ಮತ್ತು ವಿದ್ಯಾರ್ಹತೆ | ಒಟ್ಟು ಗೌರವಧನದ ಮೊತ್ತ |
|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 35,000/- |
| 2 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 38,000/- |
| 3 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 39,000/- |
| 4 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 40,000/- |

| | | |
|---|---|---|
| **ಈ)** | ಈ ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಕಾರ್ಯಭಾರದ ಒತ್ತಡ ಹೆಚ್ಚಾಗಿರುವುದರಿಂದ ಇದನ್ನು ಕಡಿಮೆ ಮಾಡಲು ಮತ್ತು ಸರ್ಕಾರ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ವೇತನ ಬಹಳ ಕಡಿಮೆಯಾಗಿರುವುದರಿಂದ ಇವರಿಗೆ ಸಂಬಳವನ್ನು ಹೆಚ್ಚಳ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಕಾರ್ಯಭಾರದ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಅವರ ಸೇವಾ ಅವಧಿಯೊಂದಿಗೆ ಯು.ಜಿ.ಸಿ. ವಿದ್ಯಾರ್ಹತೆ ಆಧರಿಸಿ ಗೌರವಧನವನ್ನು ಈ ಹಿಂದೆ ನಿಗಧಿಪಡಿಸಿದ್ದ ರೂ.11,000/- ಮತ್ತು ರೂ.13,000/- ಗಳನ್ನು ಪರಿಷ್ಕರಿಸಿ, ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರನ್ವಯ ಗೌರವಧನವನ್ನು ಮೇಲಿನ ಪ್ರಶ್ನೆ (ಇ) ರಲ್ಲಿ ವಿವರಿಸಿರುವಂತೆ ಕನಿಷ್ಠ ರೂ.35,000/- ರಿಂದ ಗರಿಷ್ಠ ರೂ.40,000/- ರವರೆಗೆ ಹೆಚ್ಚಿಸಿ, ಆದೇಶಿಸಲಾಗಿದೆ.<br><br>ಅತಿಥಿ ಉಪನ್ಯಾಸಕರ ಗೌರವಧನವನ್ನು ಕಳೆದ ವರ್ಷ 2024 ರ ಮಾರ್ಚ್‌ನಲ್ಲಿ ಹೆಚ್ಚಳ ಮಾಡಿ, ಪರಿಷ್ಕರಿಸಲಾಗಿರುತ್ತದೆ. |

**ಸಂಖ್ಯೆ: ಇಡಿ 440 ಡಿಸಿಇ 2025 (ಇ)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು.